ಆದರೆ, ವಿದ್ಯುತ್ ಉತ್ಪಾದನಾ ಘಟಕಗಳಲ್ಲಿ ಆಕಸ್ಮಿಕವಾಗಿ ತಾಂತ್ರಿಕ ತೊಂದರೆ ಉಂಟಾದಾಗ ಮತ್ತು ವಿದ್ಯುತ್ ಸರಬರಾಜಿನಲ್ಲಿ ಸ್ವಲ್ಪ ಮಟ್ಟಿನ ವ್ಯತ್ಯಯ ಉಂಟಾಗುತ್ತದೆ.

ಚಿಕ್ಕೋಡಿ ಪಟ್ಟಣದಲ್ಲಿ ಬಿ.ಎಸ್ಸಿ (ಅಗ್ರಿ) ಕಾಲೇಜು ಸ್ಥಾಪನೆ

673(1343); ಶ್ರೀ ಗಣೇಶ್ ಪ್ರಕಾಶ್ ಹುಕ್ಕೇರಿ (ಚಿಕ್ಕೋಡಿ ಸದಲಗ)

ಅ) ಚಿಕ್ಕೋಡಿ ಪಟ್ಟಣದಲ್ಲಿ ಕೃಷಿ ವಿಶ್ವವಿದ್ಯಾಲಯ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇಲ್ಲದಿದ್ದಲ್ಲಿ ಕಾರಣವೇನು; ಇದ್ದಲ್ಲಿ ಎಂದಿನಿಂದ ಕಾರ್ಯಾರಂಭ ಮಾಡಲಾಗುವುದು;

ಆ) ರೈತನೇ ದೇಶದ ಬೆನ್ನುಲುಬಾಗಿದ್ದರೂ, ರೈತರು ಕೃಷಿ ಚಟುವಟಿಕೆಗಳಿಂದ ದೂರವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಚಿಕ್ಕೋಡಿ ಭಾಗದಲ್ಲಿ ಕೃಷಿ ಚಟುವಟಿಕೆಗಳನ್ನು ಹೆಚ್ಚಿಸಲು ಅನುವಾಗುವಂತೆ ಸರ್ಕಾರಿ ಬಿ.ಎಸ್ಸಿ (ಅಗ್ರಿ) ಕಾಲೇಜನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದರೆ ಯಾವಾಗ ಪ್ರಾರಂಭಿಸಲಾಗುವುದು; ಇಲ್ಲದಿದ್ದಲ್ಲಿ ಕಾರಣವೇನು; (ವಿವರ ನೀಡುವುದು)?

ಶ್ರೀ ಕೃಷ್ಣ ಬೈರೇಗೌಡ (ಕೃಷಿ ರಾಜ್ಯ ಸಚಿವರು)

ಅ) ಅಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇರುವುದಿಲ್ಲ.

ಆ) ಹೌದು, ರಾಜ್ಯದ ಕೆಲವು ಪ್ರಮುಖ ನಗರಗಳ ಬಳಿ ನಗರೀಕರಣದ ವಿಸ್ತಾರ, ಇತರೆ ಉದ್ಯಮ ವಲಯಗಳಲ್ಲಿ ಉದ್ಯೋಗಾವಕಾಶಗಳು, ಕೃಷಿ ವಲಯದಲ್ಲಿ ಹವಾಮಾನ ವೈಪರೀತ್ಯದ ಕಾರಣ ಅನಿಶ್ಚಿತ ಆದಾಯ, ಇತ್ಯಾದಿ ಕಾರಣಗಳಿಂದ ರಾಜ್ಯದ ಕೆಲವು ಭಾಗಗಳಲ್ಲಿ ರೈತರು ಕೃಷಿ

ಚಟುವಟಿಕೆಗಳಿಂದ ದೂರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

- ಪ್ರಾಥಮಿಕ ವಲಯದ ಕೃಷಿಯನ್ನು ಲಾಭದಾಯಕವಲ್ಲವೆನ್ನುವ ಜನರ ಅಭಿಪ್ರಾಯವನ್ನು ಸರ್ಕಾರ ಗಮನಿಸಿದ್ದು, ಇದನ್ನು ಬದಲಾಯಿಸಲು ಪ್ರಯತ್ನಿಸುತ್ತಿದೆ.

- ಯುವಕರು ಕೃಷಿಯ ಜೊತೆಗೆ ತಾವು ನೆಲಸಿರುವ ಪ್ರದೇಶಗಳಲ್ಲಿಯೇ ಕೃಷಿ ಆಧಾರಿತ ಉದ್ಯಮಗಳಲ್ಲಿ ತೊಡಗಿಸಿಕೊಳ್ಳುವಂತೆ ಅನುಕೂಲ ಮಾಡಿಕೊಡಲು ವಿವಿಧ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

- ಕೃಷಿ ವಿಶ್ವವಿದ್ಯಾನಿಲಯವು ಕೃಷಿಯನ್ನು ಲಾಭದಾಯಕ ಕೃಷಿಯನ್ನಾಗಿ ಮಾಡಲು ಸಣ್ಣ ಹಿಡುವಳಿಗಳಿಗೆ ಸೂಕ್ತವಾದ ಅನೇಕ ಸಮಗ್ರ ಕೃಷಿ ಪದ್ಧತಿಗಳ ಮಾದರಿಗಳನ್ನು ಸಿದ್ಧಪಡಿಸಿ ಜನಪ್ರಿಯಗೊಳಿಸಲಾಗುತ್ತಿದೆ. ಇದರಿಂದ ಕೃಷಿಕರ ವರಮಾನದಲ್ಲಿ ಸುಸ್ಥಿರತೆ ಸಾಧಿಸಬಹುದಲ್ಲದೆ, ವರ್ಷಪೂರ್ತಿ ಉದ್ಯೋಗವನ್ನು ಒದಗಿಸುತ್ತದೆ.

- ಭವಿಷ್ಯದಲ್ಲಿ ಪ್ರಾಥಮಿಕ ವಲಯವನ್ನು ಬಲಪಡಿಸಿ ಯುವಕರಿಗೆ ಉದ್ಯೋಗಾವಕಾಶಗಳನ್ನು ಹೆಚ್ಚಿಸಲು ಗ್ರಾಮೀಣ ಭಾಗದಲ್ಲಿ ಮೂಲಸೌಕರ್ಯಗಳಾದ ರಸ್ತೆ ನಿರ್ಮಾಣ, ಸುಧಾರಿತ ಮಾರುಕಟ್ಟೆ ಸೌಲಭ್ಯ, ಉಗ್ರಾಣಗಳ ನಿರ್ಮಾಣ, ಸಂಸ್ಕರಣಾ ಘಟಕಗಳ ನಿರ್ಮಾಣ ಇತ್ಯಾದಿಗಳ ಅಭಿವೃದ್ಧಿಗೆ ಒತ್ತು ನೀಡಿದಲ್ಲಿ ಪ್ರಾಥಮಿಕ ವಲಯವನ್ನು ಪುನಶ್ಚೇತನಗೊಳಿಸಬಹುದಾಗಿದೆ ಎಂಬುದು ಕೃಷಿ ವಿಶ್ವವಿದ್ಯಾನಿಲಯಗಳ ಅಭಿಪ್ರಾಯವಾಗಿದೆ.

- ಖುಷ್ಕಿ ಬೇಸಾಯದಲ್ಲಿ ಮಳೆ ಅನಿಶ್ಚಿತತೆಗೆ ಮಳೆಯ ಪ್ರಾರಂಭ, ಮಳೆಯ ಹಂಚಿಕೆ ಮತ್ತು ಮಳೆ ನಿಂತು ಹೋಗುವ ಕಾಲದ ಆಧಾರದ ಮೇಲೆ ಸೂಕ್ತ ಪರ್ಯಾಯ ಬೆಳೆ ಯೋಜನೆ/ತಳಿ ಬದಲಾವಣೆ ಮತ್ತು ಹವಾಮಾನ ವೈಪರೀತ್ಯಕ್ಕೆ ಸೂಕ್ತವಾದ ತಂತ್ರಜ್ಞಾನಗಳನ್ನು ಅಳವಡಿಸುವ ದಿಕ್ಕಿನಲ್ಲಿ ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಡುವ ಎಲ್ಲಾ ಜಿಲ್ಲೆಗಳಿಗೂ ಪರ್ಯಾಯ ಬೆಳೆಯೋಜನೆಯನ್ನು ತಯಾರಿಸಿದ್ದು, ಜಿಲ್ಲಾ ಜಂಟಿ ಕೃಷಿ ನಿರ್ದೇಶಕರ ಸಮಕ್ಷಮದಲ್ಲಿ ಚರ್ಚೆಮಾಡಿ ಅಳವಡಿಸಲು ಪರಿಶೀಲಿಸಲಾಗುತ್ತಿದೆ.

- ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಡಿಪ್ಲೊಮಾ, ಬಿ.ಎಸ್ಸಿ (ಕೃಷಿ) ಹಾಗೂ ತತ್ಸಮಾನ ಪದವಿಗಳ ಶಿಕ್ಷಣದಲ್ಲಿ ರೈತರ ಹಾಗೂ ಕೃಷಿ ಕಾರ್ಮಿಕರ ಮಕ್ಕಳ ಪ್ರವೇಶಕ್ಕೆ ಈಗಿರುವ ಮೀಸಲಾತಿ ಪ್ರಮಾಣವನ್ನು ಶೇಕಡಾ 40ಕ್ಕೆ ಹೆಚ್ಚಿಸಿ ಆದೇಶಿಸಲಾಗಿದೆ. ಉದ್ಯೋಗದಲ್ಲಿ ಮೀಸಲಾತಿ ಪ್ರಸ್ತಾಪ ಸರ್ಕಾರದ ಮುಂದೆ ಇರುವುದಿಲ್ಲ.

ಇ) ಸದ್ಯಕ್ಕೆ ಇರುವುದಿಲ್ಲ.

ಹೊಸ ಪಂಪ್‌ಸೆಟ್‌ಗಳ ಸಂಪರ್ಕಕ್ಕೆ ಅಧಿಕ ಶುಲ್ಕ ವಿಧಿಸುತ್ತಿರುವುದು

674(1314); ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು)

ಅ) ಉಡುಪಿ ಜಿಲ್ಲೆಯ ಹೊಸದಾಗಿ ಕೃಷಿ ನೀರಾವರಿ ಪಂಪ್‌ಸೆಟ್‌ಗಳ ಸಂಪರ್ಕ ಕೋರಿ ನೋಂದಾಯಿಸಲಾದ ಫಲಾನುಭವಿಗಳಿಗೆ ರೂ. 10,000/– ಅಧಿಕ ಶುಲ್ಕ ಪಾವತಿಸಲು ಕಡ್ಡಾಯಗೊಳಿಸಲಾಗಿದೆಯೇ;

ಆ) ಅಕ್ರಮ ಸಕ್ರಮ ವ್ಯಾಪ್ತಿಯಲ್ಲಿಲ್ಲದ ಉಡುಪಿ ಜಿಲ್ಲೆಗೂ ಅಧಿಕ ಶುಲ್ಕ ಪಾವತಿ ಕಡ್ಡಾಯಗೊಳಿಸಿರುವುದು ಏಕೆ;